# ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ
# ನ್ಯಾಯಾಲಯ ಮಾಗಡಿ

## ಕ್ರಿಮಿನಲ್ ಪ್ರಕರಣ ಸಂಖ್ಯೆ ಃ 5827 / 2022

ಪಿರ್ಯಾದುದಾರರು ಃ ಕುದೂರು ಪೋಲಿಸ್ ಠಾಣೆ

**ವಿರುದ್ಧ**

**ಆರೋಪಿ ಃ ಸಂತೋಷ್**

**ಚಾಸಾ ಃ- 12 / ಪ್ರಾಸಾ ಃ- 06**

| | |
|---|---|
| ಹೆಸರು | **ಗುರುಮೂರ್ತಿ** |
| ತಂದೆಯ / ಗಂಡನ ಹೆಸರು | **ತಿಮ್ಮಭೈರಪ್ಪ** |
| ವಯಸ್ಸು | **31** |
| ಉದ್ಯೋಗ | **ಮುಖ್ಯ ಪೇದೆ** |
| ವಿಳಾಸ | **ಬೆಂಗಳೂರು** |

**ದಿನಾಂಕಃ 27-03-2024 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ** ಃ- **ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ** ಃ-

ನಾನು ಆಗಸ್-2019 ರಿಂದ ಇಲ್ಲಿಯವರೆಗೂ ಕುದೂರು ಪೋಲಿಸ್ ಠಾಣೆಯಲ್ಲಿ ಮುಖ್ಯ ಪೇದೆ ಯಾಗಿ ಕರ್ತವ್ಯ ನಿರ್ವಹಿಸಿಸುತ್ತಿದ್ದೇನೆ.

12-03-2022 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ರಾತ್ರಿ 7.30 ಗಂಟೆಯ ಸಮಯದಲ್ಲಿ ಚಾಸಾ-1 ರವರು ಠಾಣೆಗೆ ಹಾಜರಾಗಿ ನೀಡಿದ ಲಿಖಿತ ದೂರನ್ನು

ಪಡೆದು ಠಾಣ ಮೊಕದ್ದಮ್ಮೆ ಸಂಖ್ಯೆ:121/2022 ಕಲಂ-279 ಮತ್ತು 304(ಎ) ರ ಐಪಿಸಿ ರೀತ್ಯಾ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಯವರಿಗೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಯು ದೂರನ್ನು ನೋಡಿ ಗುರುತಿಸಿದ್ದು, ದೂರನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲ್ಪಟ್ಟಿದು, ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಯು ಪ್ರಥಮ ವರ್ತಮಾನ ವರದಿಯನ್ನು ನೋಡಿ ಗುರುತಿಸಿದ್ದು, ಪ್ರಥಮ ವರ್ತಮಾನ ವರದಿಯನ್ನು ನಿಪಿ-18 ಎಂದು, ಸಾಕ್ಷಿಯ ಸಹಿಯನ್ನು ನಿಪಿ-18(ಎ) ಎಂದು ಗುರುತಿಸಲಾಯಿತು. ಸದರಿ ಪ್ರಕರಣವನ್ನು ಘೋರ ಪ್ರಕರಣವಾಗಿದ್ದರಿಂದ ಮುಂದಿನ ತನಿಖೆಯನ್ನು ಚಾಸಾ-13 ರವರಿಗೆ ವರ್ಗಾಹಿಸಿಕೊಂಡಿರುತ್ತೇನೆ.

**ಪಾಟೀ ಸವಾಲು ಃ- ಶ್ರೀ.ಕೆ. ಎನ್. ಎ ವಕೀಲರಿಂದ ಆರೋಪಿ ಪರವಾಗಿ ಃ-**

ದೂರನ್ನು ಪಿರ್ಯಾದಿ ಠಾಣೆಯಲ್ಲೆ ಬರೆದಿರತ್ತಾರಾ ಅಥವಾ ನಂತರ ನೀಡಿರುತ್ತಾರರಾ ಎಂದರೆ ತಂದು ನೀಡಿರುತ್ತಾರೆ ಎಂದು ನುಡಿಯುತ್ತಾರೆ. ಮೃತ ವ್ಯಕ್ತಿಗೆ ವಾಹನ ಪರಿವಾನಿಗೆ ಇದೆಯಾ ಇಲ್ಲವಾ ಎಂದು ಪರಿಶೀಲನೆ ಮಾಡಿರುತ್ತೀರಾ ಎಂದರೆ ಇಲ್ಲ ಎಂದು ನುಡಿಯುತ್ತಾರೆ. ಮೃತ ವ್ಯಕ್ತಿಗೆ ಯಾವುದೇ ವಾಹನ ಚಾಲನೆ ಪರವಾಗಿನಿಗೆ ಇಲ್ಲ ಅವರಾಗಿಯೇ ಹೋಗಿ ಬಿದ್ದು, ಪರಿಹಾರವನ್ನು ಪಡೆದುಕೊಳ್ಳಲು ಅವರ ಕುಟುಂಬದವರು ಸುಳ್ಳು ದೂರನ್ನು ದಾಖಲಿಸಿರುತ್ತಾರೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಃ- ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**ಅ. ನ್ಯಾ. ದಂ. ಮತ್ತು ಜೆ. ಎಂ. ಎಫ್. ಸಿ. ಮಾಗಡಿ.**